**All India Radio: Bangalore**
**National Bulletins In Kannada**
**28.06.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಐದು ವರ್ಷದೊಳಗಿನ ಮಕ್ಕಳ ಮರಣ ಪ್ರಮಾಣದಲ್ಲಿ ಶೇಕಡಾ ೭೮ ರಷ್ಟು ಇಳಿಕೆ ಸಾಧಿಸಿದ ಭಾರತ; ವಿಶ್ವಸಂಸ್ಥೆ ವರದಿ

೨. ಮನ್ ಕಿ ಬಾತ್; ೧೨೩ನೇ ಆವೃತ್ತಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು

೩. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿರುವ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರೊಂದಿಗೆ ಸಂವಾದ ನಡೆಸಿದ ಪ್ರಧಾನಿ

೪. ಮಹಿಳಾ ಟಿ-೨೦ ಕ್ರಿಕೆಟ್; ಭಾರತದ ವಿರುದ್ಧ ಟಾಸ್ ಗೆದ್ದ ಇಂಗ್ಲೆಂಡ್ ಫೀಲ್ಡಿಂಗ್ ಆಯ್ಕೆ

<><*<><>*><>

ಭಾರತವು, ಐದು ವರ್ಷದೊಳಗಿನ ಮಕ್ಕಳ ಮರಣ ಪ್ರಮಾಣದಲ್ಲಿ ಶೇಕಡಾ ೭೮ ರಷ್ಟು ಇಳಿಕೆ ಸಾಧಿಸಿದ್ದು, ಜಾಗತಿಕ ಶೇಕಡಾ ೬೧ ರಷ್ಟು ಇಳಿಕೆಯನ್ನು ಮೀರಿಸಿದೆ. ವಿಶ್ವಸಂಸ್ಥೆಯ, ಮಕ್ಕಳ ಮರಣ ಅಂದಾಜು ೨೦೨೪ ರ ಅಂತರ-ಸಂಸ್ಥೆ ಗುಂಪಿನ ವರದಿಯ ಪ್ರಕಾರ, ನವಜಾತ ಶಿಶು ಮರಣ ಪ್ರಮಾಣವು, ಜಾಗತಿಕವಾಗಿ ಶೇಕಡ ೫೪ ಕ್ಕೆ ಹೋಲಿಸಿದರೆ, ಭಾರತದಲ್ಲಿ ಶೇಕಡಾ ೭೦ ರಷ್ಟು ಕಡಿಮೆಯಾಗಿದೆ. ಲಸಿಕೆ ವ್ಯಾಪ್ತಿಯನ್ನು ಸುಧಾರಿಸುವತ್ತ ನಿರಂತರ ಗಮನ ಹರಿಸುತ್ತಾ, ಭಾರತವು, ಬಡ ಜನಸಂಖ್ಯೆಯನ್ನು ತಲುಪಲು ಪೂರ್ವಭಾವಿ ಮತ್ತು ಅಂತರ್ಗತ ವಿಧಾನವನ್ನು ತೆಗೆದುಕೊಂಡಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ೨.೯ ಕೋಟಿ ಗರ್ಭಿಣಿಯರು ಮತ್ತು ೨.೬ ಕೋಟಿ ಶಿಶುಗಳಿಗೆ ವಾರ್ಷಿಕವಾಗಿ ಉಚಿತ ಲಸಿಕೆ ಸೇವೆಗಳನ್ನು ಒದಗಿಸುವ ಸಾರ್ವತ್ರಿಕ ರೋಗನಿರೋಧಕ ಕಾರ್ಯಕ್ರಮದ ಮೂಲಕ ಭಾರತದ ರೋಗನಿರೋಧಕ ಶಕ್ತಿಯ ಅಚಲ ಬದ್ಧತೆಯು ಸ್ಪಷ್ಟವಾಗಿದೆ. ಲಸಿಕೆ ಅಭಿಯಾನಗಳ ನಿರಂತರ ಮತ್ತು ತೀವ್ರ ಅನುಷ್ಠಾನದ ಪರಿಣಾಮವಾಗಿ, ಒಟ್ಟು ಜನಸಂಖ್ಯೆಯಲ್ಲಿ ಭಾರತದ ಶೂನ್ಯ-ಡೋಸ್ ಮಕ್ಕಳ ಶೇಕಡಾವಾರು ಪ್ರಮಾಣವು ೨೦೨೩ ರಲ್ಲಿ ಶೇಕಡಾ ೦.೧೧ ರಿಂದ ೨೦೨೪ ರಲ್ಲಿ ಶೇಕಡಾ ೦.೦೬ ಕ್ಕೆ ಇಳಿಕೆಯಾಗಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><*<><>*><>

ನವದೆಹಲಿಯಲ್ಲಿ ಇದೇ ತಿಂಗಳ ಕೊನೆಯಲ್ಲಿ ನಡೆಯಲಿರುವ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಹಕಾರ ಸಚಿವರ ಮಂಥನ ಬೈಠಕ್‌ನ ಅಧ್ಯಕ್ಷತೆಯನ್ನು ಕೇಂದ್ರ ಸಹಕಾರ ಸಚಿವ ಅಮಿತ್ ಶಾ ವಹಿಸಲಿದ್ದಾರೆ. ಸಹಕಾರಿ ವಲಯದ ಪ್ರಗತಿಯನ್ನು ಪರಿಶೀಲಿಸಲು, ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಮತ್ತು ಈ ವಲಯವನ್ನು ಬಲಪಡಿಸುವ ಸಾಮೂಹಿಕ ಗುರಿಯನ್ನು ಸಾಧಿಸಲು ಮುಂದಿನ ಮಾರ್ಗವನ್ನು ರೂಪಿಸುವ ವೇದಿಕೆಯಾಗಿ ಈ ಸಭೆಯು ಕಾರ್ಯನಿರ್ವಹಿಸಲಿದೆ. ಎರಡು ಲಕ್ಷ ಹೊಸ ಬಹುಪಯೋಗಿ ಪ್ರಾಥಮಿಕ ಕೃಷಿ ಸಾಲ ಸಂಘಗಳ ಸ್ಥಾಪನೆ ಮತ್ತು ಕೊನೆಯ ಹಂತದ ಗ್ರಾಮೀಣ ಸೇವಾ ವಿತರಣೆಯನ್ನು ಬಲಪಡಿಸಲು ಡೈರಿ ಮತ್ತು ಮೀನುಗಾರಿಕಾ ಸಹಕಾರಿ ಸಂಘಗಳ ಸ್ಥಾಪನೆ ಸೇರಿದಂತೆ ಎಲ್ಲಾ ಪ್ರಮುಖ ಉಪಕ್ರಮಗಳನ್ನು ಸಭೆಯಲ್ಲಿ ಚರ್ಚಿಸಲಾಗುವುದು. ಆಹಾರ ಭದ್ರತೆ ಮತ್ತು ರೈತರ ಸಬಲೀಕರಣವನ್ನು ಹೆಚ್ಚಿಸುವ ಗುರಿ ಹೊಂದಿರುವ ಈ ಸಭೆಯಲ್ಲಿ, ಸಹಕಾರಿ ವಲಯದ ವಿಶ್ವದ ಅತಿದೊಡ್ಡ ಧಾನ್ಯ ಸಂಗ್ರಹ ಯೋಜನೆಯ ಕುರಿತು ಚರ್ಚೆಯೂ ನಡೆಯಲಿದೆ.

<><*<><>*><>

ಕೃಷಿ ಅರಣ್ಯೀಕರಣವನ್ನು ಉತ್ತೇಜಿಸುವ ಪ್ರಯತ್ನದಲ್ಲಿ ಕೇಂದ್ರ ಸರ್ಕಾರವು ಕೃಷಿ ಭೂಮಿಯಲ್ಲಿರುವ ಮರಗಳನ್ನು ಕಡಿಯಲು ಮಾದರಿ ನಿಯಮಗಳನ್ನು ಹೊರಡಿಸಿದೆ. ಇದು ರೈತರ ಆದಾಯವನ್ನು ದ್ವಿಗುಣಗೊಳಿಸುವುದು, ಕಾಡುಗಳ ಹೊರಗೆ ಮರಗಳ ಹೊದಿಕೆಯನ್ನು ಹೆಚ್ಚಿಸುವುದು, ಹವಾಮಾನ ಬದಲಾವಣೆಯನ್ನು ತಗ್ಗಿಸುವುದು, ಮರದ ಆಮದುಗಳನ್ನು ಕಡಿಮೆ ಮಾಡುವುದು ಮತ್ತು ಸುಸ್ಥಿರ ಭೂ ಬಳಕೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ. ಈ ಪ್ರಯತ್ನವು, ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ಭಾರತದ ಹವಾಮಾನ ಗುರಿಗಳನ್ನು ಸಹ ಬೆಂಬಲಿಸುತ್ತದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಇಂದು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿರುವ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರೊಂದಿಗೆ ಸಂವಾದ ನಡೆಸಿದರು. ಅಮೆರಿಕದ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಬುಧವಾರ, ಭಾರತೀಯ ಶುಭಾಂಶು ಶುಕ್ಲಾ ಸಹಿತ ನಾಲ್ಕು ಗಗನಯಾತ್ರಿಗಳನ್ನು ಹೊತ್ತ ಆಕ್ಸಿಯಮ್ -೪ ಮಿಷನ್ ಅನ್ನು ಉಡಾವಣೆ ಮಾಡಲಾಯಿತು. ೧೯೮೪ ರಲ್ಲಿ ಸೋವಿಯತ್ ಕಾರ್ಯಾಚರಣೆಯ ಭಾಗವಾಗಿ ವಿಂಗ್ ಕಮಾಂಡರ್ ರಾಕೇಶ್ ಶರ್ಮಾ ಬಾಹ್ಯಾಕಾಶ ಪ್ರಯಾಣವನ್ನು ಮಾಡಿದ ನಾಲ್ಕು ದಶಕಗಳ ನಂತರ, ಕ್ಯಾಪ್ಟನ್ ಶುಕ್ಲಾ ಬಾಹ್ಯಾಕಾಶಕ್ಕೆ ಪ್ರಯಾಣ ಬೆಳೆಸಿದ ಎರಡನೇ ಭಾರತೀಯ ಗಗನಯಾತ್ರಿ ಎನಿಸಿಕೊಂಡಿದ್ದಾರೆ.

<><*<><>*><>

ಭಾರತೀಯ ಚುನಾವಣಾ ಆಯೋಗವು, ಬಿಹಾರದಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಪೂರ್ಣ ಭಾಗವಹಿಸುವಿಕೆಯೊಂದಿಗೆ ಪ್ರತಿಯೊಬ್ಬ ಮತದಾರರ ಅರ್ಹತೆಯನ್ನು ಪರಿಶೀಲಿಸಲು, ವಿಶೇಷ ತೀವ್ರ ಪರಿಷ್ಕರಣಾ ಕಾರ್ಯವನ್ನು ಯಶಸ್ವಿಯಾಗಿ ಪ್ರಾರಂಭಿಸಿದೆ. ಅಸ್ತಿತ್ವದಲ್ಲಿರುವ ೭೭ ಸಾವಿರದ ೮೦೦ ಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳೊಂದಿಗೆ, ಹೊಸ ಮತಗಟ್ಟೆಗಳಿಗೆ ಸುಮಾರು ೨೦ ಸಾವಿರದ ೬೦೩ ಹೆಚ್ಚುವರಿ ಅಧಿಕಾರಿಗಳನ್ನು ನೇಮಿಸಲಾಗಿದೆ. ಪರಿಷ್ಕರಣೆಯ ಸಮಯದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಸ್ವಯಂಸೇವಕರು ನಿಜವಾದ ಮತದಾರರಿಗೆ, ವಿಶೇಷವಾಗಿ ವೃದ್ಧರು, ರೋಗಿಗಳು, ಅಂಗವಿಕಲರು, ಬಡವರು ಮತ್ತು ಇತರ ದುರ್ಬಲ ಗುಂಪುಗಳಿಗೆ ಸಹಾಯ ಮಾಡುತ್ತಾರೆ. ಚುನಾವಣಾ ಸಂಸ್ಥೆಯು ಹೊಸ ಗಣತಿ ನಮೂನೆಗಳ ಮುದ್ರಣವನ್ನು ಪ್ರಾರಂಭಿಸಿದೆ ಮತ್ತು ೨೪೩ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಹಾರದ ಎಲ್ಲಾ ಅಸ್ತಿತ್ವದಲ್ಲಿರುವ ಏಳು ಕೋಟಿ ೮೯ ಲಕ್ಷ ಮತದಾರರಿಗೆ ಮನೆ ಬಾಗಿಲಿಗೆ ವಿತರಣೆಯನ್ನು ಪ್ರಾರಂಭಿಸಿದೆ. ಭೌತಿಕ ನಮೂನೆಗಳೊಂದಿಗೆ ಹೊಸ ಗಣತಿ ನಮೂನೆಗಳ ಆನ್‌ಲೈನ್ ಭರ್ತಿಯನ್ನು ಯಶಸ್ವಿಯಾಗಿ ಪ್ರಾರಂಭಿಸಲಾಗಿದೆ.

<><*<><>*><>

ಭಾರತವನ್ನು ಹೊರತುಪಡಿಸಿ, ಬೇರೆ ಯಾವುದೇ ಸಂವಿಧಾನದ ಪೀಠಿಕೆ ಬದಲಾವಣೆಗೆ ಒಳಗಾಗಿಲ್ಲ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ಪುಸ್ತಕ ಬಿಡುಗಡೆ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಪೀಠಿಕೆಯು, ಸಂವಿಧಾನದ ಬೆಳವಣಿಗೆಯ ಆಧಾರವಾಗಿದೆ, ಆದರೆ ತುರ್ತು ಪರಿಸ್ಥಿತಿಯ ಕಾಲದಲ್ಲಿ, ಜನರು ವಾಸ್ತವಿಕವಾಗಿ ಅಸಹಾಯಕರಾಗಿದ್ದ ಸಮಯದಲ್ಲಿ ಸಂವಿಧಾನಕ್ಕೆ ವಿನಾಶಕಾರಿಯಾಗಿ ಬದಲಾವಣೆ ತರಲಾಗಿದೆ ಎಂದು ಹೇಳಿದರು. ತುರ್ತು ಪರಿಸ್ಥಿತಿಯ ಸಮಯದಲ್ಲಿ ಪೀಠಿಕೆಯಲ್ಲಿ ಸಮಾಜವಾದಿ, ಜಾತ್ಯತೀತ ಮತ್ತು ಸಮಗ್ರತೆ ಎಂಬ ಪದಗಳನ್ನು ಸೇರಿಸುವುದು ಸಂವಿಧಾನದ ರಚನಾಕಾರರ ಮನಸ್ಥಿತಿಗೆ ದ್ರೋಹ ಬಗೆಯುವುದನ್ನು ಸೂಚಿಸುತ್ತದೆ ಎಂದು ಉಪರಾಷ್ಟ್ರಪತಿಗಳು ತಿಳಿಸಿದ್ದಾರೆ.

<><*<><>*><>

ಭಾರತದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಕರಡು ರಚನಾ ಸಮಿತಿಯ ಅಧ್ಯಕ್ಷರಾಗಿ ದೇಶವನ್ನು ಒಗ್ಗಟ್ಟಿನಿಂದ ಇರಿಸುವ ಸಂವಿಧಾನವನ್ನು ರೂಪಿಸಲು ಪಟ್ಟ ಶ್ರಮದಾಯಕ ಪ್ರಯತ್ನಗಳನ್ನು ಭಾರತದ ಮುಖ್ಯ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಶ್ಲಾಘಿಸಿದ್ದಾರೆ. ಇಂದು ನಾಗ್ಪುರ ವಿಶ್ವವಿದ್ಯಾಲಯದ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಕಾನೂನು ಶಾಲೆಯ ಆವರಣದಲ್ಲಿ ದೇಶದ ಮೊದಲ ಸಂವಿಧಾನದ ಪೀಠಿಕೆ ಉದ್ಯಾನವನವನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಭಾರತದ ಏಕತೆಯನ್ನು ಕಾಪಾಡುವಲ್ಲಿ ಸಂವಿಧಾನದ ಪಾತ್ರವನ್ನು ಪ್ರಸ್ತಾಪಿಸಿದರು. ಶಾಂತಿ ಮತ್ತು ಯುದ್ಧದ ಸಮಯದಲ್ಲೂ ದೇಶವನ್ನು ಒಗ್ಗಟ್ಟಿನಿಂದ ಇರಿಸಿದ್ದು ಸಂವಿಧಾನ. ದೇಶದ ಮೊದಲ ಸಂವಿಧಾನ ಪೀಠಿಕೆ ಉದ್ಯಾನವನವನ್ನು, ಅಂಬೇಡ್ಕರ್ ಬೌದ್ಧಧರ್ಮವನ್ನು ಸ್ವೀಕರಿಸಿದ ಐತಿಹಾಸಿಕ ನಗರವಾದ ನಾಗ್ಪುರದಲ್ಲಿ ಸ್ಥಾಪಿಸಲಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಉಪಸ್ಥಿತರಿದ್ದರು.

<><*<><>*><>

ನಾಟಿಂಗ್‌ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್‌ನಲ್ಲಿಂದು ಭಾರತ ಹಾಗೂ ಇಂಗ್ಲೆಂಡ್ ವನಿತೆಯ ತಂಡಗಳ ನಡುವಿನ ಐದು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಗೆ ಚಾಲನೆ ದೊರೆಯಿತು. ಸರಣಿಯ ಮೊದಲ ಪಂದ್ಯದಲ್ಲಿ ಟಾಸ್ ಗೆದ್ದ ಇಂಗ್ಲೆಂಡ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತೀಯ ವನಿತೆಯರ ತಂಡ, ಇತ್ತೀಚಿನ ವರದಿ ಬಂದಾಗ ೮ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೭೫ ರನ್ ಮಾಡಿ ಆಡುತ್ತಿದೆ.

<><*<><>*><>

ಗುಜರಾತ್‌ನ ಪಂಚಮಹಲ್ ಜಿಲ್ಲೆಯ ಗೋಧ್ರಾದಲ್ಲಿರುವ ಶ್ರೀ ಗೋವಿಂದ ಗುರು ವಿಶ್ವವಿದ್ಯಾಲಯದಲ್ಲಿಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ, ವರ್ಚುವಲ್ ಮೂಲಕ ವಿವಿಧ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಹೊಸದಾಗಿ ನಿರ್ಮಿಸಲಾದ ಸೆಂಟರ್ ಆಫ್ ಎಕ್ಸಲೆನ್ಸ್ ಕಟ್ಟಡ, ಮಿಯಾವಾಕಿ ಸಸಿ ನೆಡುವ ವಿಧಾನ, ಜಲಾಶಯ, ಕ್ರೀಡಾ ಸಂಕೀರ್ಣವನ್ನು ಸಚಿವರು ಉದ್ಘಾಟಿಸಿದರು.

<><*<><>*><>

ಪಶ್ಚಿಮ ಬಂಗಾಳದ ಹೌರಾ ಜಿಲ್ಲೆಯ ಸಂತ್ರಗಚಿ ರೈಲು ನಿಲ್ದಾಣದಿಂದ ಪುರುಲಿಯಾ - ಬಂಕುರಾ - ಹೌರಾ ಪ್ರಯಾಣಿಕ ರೈಲು ಸೇವೆಯನ್ನು ಇಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ವರ್ಚುವಲ್ ಮೂಲಕ ಉದ್ಘಾಟಿಸಿದರು. ಇದೇ ವೇಳೆ ಅವರು, 'ಅಮೃತ ಭಾರತ್ ನಿಲ್ದಾಣ' ಯೋಜನೆಯಡಿಯಲ್ಲಿ ಪ್ರಗತಿ ಪರಿಶೀಲಿಸಿದರು.

<><*<><>*><>

ಗುಪ್ತಚಾರ ಇಲಾಖೆ, ಸಂಶೋಧನೆ ಮತ್ತು ವಿಶ್ಲೇಷಣಾ ವಿಭಾಗ - ರಾ ನ ಮುಂದಿನ ಕಾರ್ಯದರ್ಶಿಯಾಗಿ ಹಿರಿಯ ಐಪಿಎಸ್ ಅಧಿಕಾರಿ ಪರಾಗ್ ಜೈನ್ ಅವರನ್ನು, ಎರಡು ವರ್ಷಗಳ ಅವಧಿಗೆ ಕೇಂದ್ರ ಸರ್ಕಾರ ನೇಮಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>